ಕರ್ನಾಟಕ ಸರ್ಕಾರ

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ,

ಜಿಲ್ಲಾ ಸರ್ವೇಕ್ಷಣಾ ಘಟಕ, ಜಿಲ್ಲಾ ಎನ್.ಸಿ.ಡಿ ಕೋಶ,

ರಾಷ್ಟ್ರೀಯ ಅಸಾಂಕ್ರಮಿಕ ರೋಗಗಳ ತಡೆಗಟ್ಟುವಿಕೆ ಮತ್ತು ನಿಯಂತ್ರಣ ಕಾರ್ಯಕ್ರಮ (ಎನ್.ಪಿ.ಎನ್.ಸಿ.ಡಿ)

ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್ ಕೊಟ್ಟಾರ ಮಂಗಳೂರು 575006

Ph.0824-2427316/2420466 **Email: npcdcsdkannada@gmail.com**

ಸಂ:ಡಿ.ಪಿ.ಎಂ.ಯು/ದ.ಕ/CPHC-UHC/CHO/55/2026–27 ದಿನಾಂಕ: 28/10/2026.

<u>ಅಧಿಕೃತ ಜ್ಞಾಪನಾ ಪತ್ರ</u>

ವಿಷಯ: ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಮುದಾಯ ಆರೋಗ್ಯ ಅಧಿಕಾರಿಗಳನ್ನು ಗ್ರಾಮೀಣ ಪ್ರದೇಶದ ಉಪಕೇಂದ್ರ–ಆಯುಷ್ಮಾನ್ ಆರೋಗ್ಯ ಕೇಂದ್ರಕ್ಕೆ ಮರುಹಂಚಿಕೆ ಮಾಡುವ ಪ್ರಕ್ರಿಯೆಗೆ ತಯಾರಿಸಿದ ಪಟ್ಟಿಯನ್ನು ಪ್ರಕಟಿಸುವ ಬಗ್ಗೆ.

****

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಮುದಾಯ ಆರೋಗ್ಯ ಅಧಿಕಾರಿಗಳನ್ನು ಗ್ರಾಮೀಣ ಪ್ರದೇಶದ ಉಪಕೇಂದ್ರ–ಆಯುಷ್ಮಾನ್ ಆರೋಗ್ಯ ಕೇಂದ್ರಗಳಿಗೆ ಮರುಹಂಚಿಕೆ ಮಾಡಲು ಆದೇಶವಾಗಿರುತ್ತದೆ. ಅದರಂತೆ ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಅನುಮತಿಯಂತೆ ಮರುಹಂಚಿಕೆ ಪ್ರಕ್ರಿಯೆ ನಡೆಸಲು ಪಟ್ಟಿಯನ್ನು ತಯಾರಿಸಲಾಗಿದ್ದು, <u>www.dkhfw.in</u> ಮತ್ತು ಈ ಕಛೇರಿಯ ನೋಟೀಸು ಬೋರ್ಡ್‌ನಲ್ಲಿ ಪ್ರಕಟಿಸಲಾಗಿದೆ.

1. ಮರುಹಂಚಿಕೆ ಮಾಡಲಾಗುವ CHO ಗಳ ಪಟ್ಟಿ.
2. ಮರುಹಂಚಿಕೆಗೆ ಲಭ್ಯವಿರುವ SC-AAK ಗಳ ಪಟ್ಟಿ.

ಈ ಪಟ್ಟಿಗೆ ಆಕ್ಷೇಪಣೆಯಿದ್ದಲ್ಲಿ ಪಟ್ಟಿಯಲ್ಲಿರುವ ಸಮುದಾಯ ಆರೋಗ್ಯ ಅಧಿಕಾರಿಗಳು ದಿನಾಂಕ: 30/10/2026ರ ಅಪರಾಹ್ನ 3:00ಗಂಟೆಯೊಳಗೆ ಲಿಖಿತವಾಗಿ ಆಕ್ಷೇಪಣೆಯನ್ನು ಮುದ್ದಾಂ ಆಗಿ ಜಿಲ್ಲಾ ಸರ್ವೇಕ್ಷಣಾ ಘಟಕ, ಜಿಲ್ಲಾ ಪಂಚಾಯತ್ ಆವರಣ ಇಲ್ಲಿಗೆ ಜಿಲ್ಲಾ ಸರ್ವೇಕ್ಷಣಾಧಿಕಾರಿ, ದ.ಕ ಮಂಗಳೂರು ಇವರ ಹೆಸರಿನಲ್ಲಿ ಸಲ್ಲಿಸಲು ಸೂಚಿಸಿದೆ.

ನಂತರ ಬಂದ ಆಕ್ಷೇಪಣೆಯನ್ನು ಪರಿಗಣಿಸಲಾಗುವುದಿಲ್ಲ.

ಜಿಲ್ಲಾ ಸರ್ವೇಕ್ಷಣಾಧಿಕಾರಿ,
ಜಿಲ್ಲಾ ಸರ್ವೇಕ್ಷಣಾ ಘಟಕ, ದ.ಕ,ಮಂಗಳೂರು.

ರಿಗೆ,

ಪಟ್ಟಿಯಲ್ಲಿರುವ ಎಲ್ಲಾ ಸಮುದಾಯ ಆರೋಗ್ಯ ಅಧಿಕಾರಿಗಳು.

ಪ್ರತಿಯನ್ನು:

1. ಜಿಲ್ಲಾ ಆರೋಗ್ಯ ಮತ್ತು ಕು.ಕ ಅಧಿಕಾರಿ, ದ.ಕ ಮಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಲಾಗಿದೆ.
2. ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ, ದ.ಕ ಮಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಲಾಗಿದೆ.
3. ಎಲ್ಲಾ ತಾಲೂಕು ಆರೋಗ್ಯಾಧಿಕಾರಿಗಳು, ದ.ಕ ಜಿಲ್ಲೆ.
4. ಎಲ್ಲಾ ಆಡಳಿತ ವೈದ್ಯಾಧಿಕಾರಿಗಳು, ಪ್ರಾ.ಆ.ಕೇಂದ್ರ/ಸ.ಆ.ಕೇಂದ್ರ/ನ.ಪ್ರಾ.ಆ.ಕೇಂದ್ರ/ನ.ಸ.ಆ.ಕೇಂದ್ರ/ತಾಲೂಕು ಆಸ್ಪತ್ರೆ ಬೆಳ್ತಂಗಡಿ.